**Bangalore**
**Regional News**
**16.05.2025 / 2.30pm**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಡೆಂಘ್ಯೂ, ಸಾಂಕ್ರಾಮಿಕ ರೋಗ ನಿಯಂತ್ರಣಕ್ಕೆ ಅಗತ್ಯ ಕ್ರಮಕೈಗೊಳ್ಳಲು ಸರ್ಕಾರದ ಸೂಚನೆ

೨. ಹಂತ ಹಂತವಾಗಿ ಕರ್ನಾಟಕಕ್ಕೆ ಎಲೆಕ್ಟ್ರಿಕ್ ಬಸ್‌ಗಳ ಹಂಚಿಕೆ - ಹೆಚ್.ಡಿ.ಕುಮಾರಸ್ವಾಮಿ

೩. ವಿಜಯನಗರ ಜಿಲ್ಲೆಯಲ್ಲಿ ಇದೇ ೨೦ ರಂದು ಕಾಂಗ್ರೆಸ್ ಸರ್ಕಾರದ ೨ನೇ ವರ್ಷದ ಸಾಧನಾ ಸಮಾವೇಶ

೪. ಐಎಂಎಫ್ ಪಾಕಿಸ್ತಾನಕ್ಕೆ ನೀಡುವ ಆರ್ಥಿಕ ಸಹಾಯ ಮರುಪರಿಶೀಲಿಸಲು ರಾಜನಾಥ್ ಸಿಂಗ್ ಮನವಿ

**<><*<><>*><>**

ಡೆಂಗ್ಯೂ ಸೇರಿದಂತೆ ಸಾಂಕ್ರಾಮಿಕ ರೋಗಗಳ ನಿಯಂತ್ರಣದ ದೃಷ್ಟಿಯಿಂದ ಅಗತ್ಯ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಆರೋಗ್ಯ ಖಾತೆ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಮಂಗಳೂರಿನಲ್ಲಿಂದು ರಾಷ್ಟ್ರೀಯ ಡೆಂಗ್ಯೂ ದಿನಾಚರಣೆಯ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರಾಜ್ಯದಲ್ಲಿ ಡೆಂಗ್ಯೂ ಪ್ರಕರಣಗಳು ವರ್ಷದಿಂದ ವರ್ಷಕ್ಕೆ ಕಡಿಮೆಯಾಗುತ್ತಿವೆ. ಸಾರ್ವಜನಿಕರ ಸಹಕಾರದಿಂದ ಮಾತ್ರ ಡೆಂಗ್ಯೂ ಸೇರಿದಂತೆ ಸಾಂಕ್ರಾಮಿಕ ರೋಗಗಳಿಗೆ ಕಡಿವಾಣ ಹಾಕಲು ಸಾಧ್ಯ. ಪ್ರತಿಯೊಬ್ಬರೂ ತಮ್ಮ ಮನೆ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದಕ್ಕೆ ಆದ್ಯತೆ ನೀಡಬೇಕು ಎಂದರು.

ಡೆಂಗ್ಯೂ ಸ್ವಚ್ಛ ನೀರಿನಲ್ಲಿಯೇ ಹುಟ್ಟುವುದರಿಂದ ಸಾರ್ವಜನಿಕರು ನೀರು ನಿಲ್ಲದಂತೆ ಮುನ್ನೆಚ್ಚರಿಕೆ ವಹಿಸಬೇಕು. ಈ ಬಗ್ಗೆ ಜಾಗೃತಿ ಮೂಡಿಸಬೇಕು. ಆರೋಗ್ಯ ಇಲಾಖೆಯ ಅಧಿಕಾರಿಗಳು ಡೆಂಗ್ಯೂ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುತ್ತಿದ್ದಾರೆ ಎಂದು ಸಚಿವರು ಹೇಳಿದರು.

<><*<><>*><>

ಹಂತ ಹಂತವಾಗಿ ಕರ್ನಾಟಕಕ್ಕೆ ಎಲೆಕ್ಟ್ರಿಕ್ ಬಸ್‌ಗಳನ್ನು ಹಂಚಿಕೆ ಮಾಡುವುದಾಗಿ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಭರವಸೆ ನೀಡಿದ್ದಾರೆ.

ಪ್ರಮುಖ ನಗರಗಳಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸಲು ಬೇಕಾದ ವ್ಯವಸ್ಥೆ ಮಾಡುವಂತೆ ಸಾರಿಗೆ ಸಚಿವ ರಾಮಲಿಂಗರೆಡ್ಡಿ ಮಾಡಿದ ಮನವಿಗೆ ಕೇಂದ್ರ ಸಚಿವರು ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿದ್ದಾರೆ.

೯ ಪ್ರಮುಖ ನಗರಗಳಿಗೆ ೧೪ ಸಾವಿರ ವಿದ್ಯುತ್ ಬಸ್‌ಗಳನ್ನು ಹಂಚಿಕೆ ಮಾಡಲಾಗುವುದು.

ಕೇಂದ್ರ ಸರ್ಕಾರ ಎಲ್ಲಾ ಮಹಾನಗರಗಳಲ್ಲಿ ಸುಲಲಿತ ಮತ್ತು ಸರಾಗ ಸಂಚಾರಕ್ಕೆ ಆದ್ಯತೆ ನೀಡುತ್ತಿದ್ದು, ಅದರಂತೆ ಮಹಾನಗರಗಳಲ್ಲಿ ಸಂಚಾರ ವ್ಯವಸ್ಥೆ ಸುಧಾರಿಸಲು ವಿದ್ಯುತ್ ಬಸ್‌ಗಳನ್ನು ಒದಗಿಸಲಾಗುವುದು ಎಂದು ಕೇಂದ್ರ ಸಚಿವರು ಹೇಳಿದರು.

<><*<><>*><>

ಕಾಂಗ್ರೆಸ್ ಸರ್ಕಾರ ೨ನೇ ವರ್ಷದ ಸಾಧನ ಸಮಾವೇಶವನ್ನು ವಿಜಯನಗರ ಜಿಲ್ಲೆಯಲ್ಲಿ ಇದೇ ೨೬ರಂದು ಹಮ್ಮಿಕೊಳ್ಳಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹೇಳಿದ್ದಾರೆ.

ಹೊಸಪೇಟೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಜಯನಗರ ಜಿಲ್ಲೆಯನ್ನು ಅಭಿವೃದ್ಧಿ ಮಾಡುವ ಉದ್ದೇಶದಿಂದ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ.

ತುಂಗಭದ್ರಾ ಜಲ ವಿವಾದಕ್ಕೆ ಸಂಬಂಧಪಟ್ಟಂತೆ ಆಂಧ್ರ ಪ್ರದೇಶ, ತೆಲಗಾಂಣ ಮುಖ್ಯಮಂತ್ರಿಗಳೊಂದಿಗೆ ಸಮಾಲೋಚನೆ ನಡೆಸಲಾಗಿದೆ ಎಂದು ಅವರು ಹೇಳಿದರು.

ತುಂಗಭದ್ರಾ ಜಲಾಶಯದ ಹೂಳಿನ ಸಮಸ್ಯೆ ಮತ್ತು ನೀರಿನ ಸಂಗ್ರಹ ಕೊರತೆ ನೀಗಿಸಲು ಕೊಪ್ಪಳ ಜಿಲ್ಲೆಯಲ್ಲಿ ಸಮಾನಾಂತರ ಜಲಾಶಯ ನಿರ್ಮಾಣ ಮಾಡಲು ಬಗ್ಗೆ ಆಂಧ್ರ ಪ್ರದೇಶ ಮತ್ತು ತೆಲಂಗಾಣ ಮುಖ್ಯಮಂತ್ರಿಗಳೊಂದಿಗೆ ಸಮಾಲೋಚನೆ ನಡೆಸಲಾಗುವುದು ಎಂದು ಬಳ್ಳಾರಿ ಜಿಲ್ಲೆಯ ತೋರಣಗಲ್ ವಿಮಾನ ನಿಲ್ದಾಣದಲ್ಲಿ ಹೇಳಿದರು.

<><*<><>*><>

ಕಾಯಕ ಗ್ರಾಮ ಯೋಜನೆಯಡಿ ದುರ್ಭಲ ಗ್ರಾಮ ಪಂಚಾಯಿತಿಗಳನ್ನು ದತ್ತು ಪಡೆದು ಸಮಗ್ರವಾಗಿ ಅಭಿವೃದ್ಧಿಪಡಿಸಬೇಕೆಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ ಖರ್ಗೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಗ್ರಾಮೀಣ ಕರ್ನಾಟಕ ಕುಡಿಯುವ ನೀರು ಸ್ಥಿತಿ ಗತಿ ಕುರಿತು ಏರ್ಪಡಿಸಿದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು. ಗ್ರಾಮಗಳ ಸುಧಾರಣೆ ಆರ್ಥಿಕ ಸುಸ್ಥಿರತೆ ಬಗ್ಗೆ ಮುಖ್ಯ ಕಾರ್ಯನಿರ್ವಹಾಧಿಕಾರಿಗಳು ವರಮಾನ ಹೆಚ್ಚಿಸುವ ಬಗ್ಗೆ ಅಧಿಕಾರಿಗಳು ಸ್ವತಂತ್ರವಾಗಿ ಆಲೋಚನೆ ಮಾಡಬೇಕೆಂದರು. ಗ್ರಾಮ ಪಂಚಾಯಿತಿಗಳಲ್ಲಿ ೧ ಸಾವಿರ ೨೭೧ ಕೋಟಿ ರೂಪಾಯಿ ಆಸ್ತಿ ತೆರಿಗೆ ಸಂಗ್ರಹಿಸುವ ಮೂಲಕ ಅತೀ ಹೆಚ್ಚು ತೆರಿಗೆ ಸಂಗ್ರಹಣೆ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಅವರು ಹೇಳಿದರು.

ಮುಖ್ಯಮಂತ್ರಿ ಅಪರ ಮುಖ್ಯ ಕಾರ್ಯದರ್ಶಿ ಎಲ್ ಕೆ ಅತೀಕ್ ಮಾತನಾಡಿ, ನದಿ ಮೂಲಗಳನ್ನು ಅವಲಂಭಿಸಿ ಕುಡಿಯುವ ನೀರು ಯೋಜನೆ ಅನುಷ್ಠಾನ ಮಾಡಲಾಗುತ್ತಿದೆ.

ಮಳೆಗಾಲ ಹೊರತುಪಡಿಸಿ ಇತರೆ ಸಮಯದಲ್ಲಿ ನದಿಗಳಲ್ಲಿ ನೀರಿನ ಹರಿವಿನ ಪ್ರಮಾಣ ಕಡಿಮೆಯಾಗಿರುತ್ತದೆ. ಇದರಿಂದ ನೀರು ಕಲುಷಿತವಾಗುವ ಸಂಭವ ಹೆಚ್ಚಾಗಿರುತ್ತದೆ. ಅದ್ದರಿಂದ ನಿಯಮಿತವಾಗಿ ನೀರನ್ನು ಪರೀಕ್ಷೆ ಮಾಡಿ ಸರಬರಾಜು ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

<><*<><>*><>

ಪಾಕಿಸ್ತಾನಕ್ಕೆ ಐಎಂಎಫ್ ನೀಡುವ ಆರ್ಥಿಕ ಸಹಾಯವನ್ನು ಮರು ಪರಿಶೀಲಿಸುವಂತೆ ಭಾರತ ಒತ್ತಾಯಿಸಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

ವಾಯುಪಡೆಯ ಯೋಧರನ್ನು ಉದ್ದೇಶಿಸಿ ಮಾತನಾಡಿದ ಅವರು, ಐಎಂಎಫ್ ಹಣಕಾಸು ನಿಧಿಯ ಹೆಚ್ಚಿನ ಭಾಗವನ್ನು ಪಾಕಿಸ್ತಾನ ಭಯೋತ್ಪಾದಕರಿಗೆ ಬೇಕಾಗುವ ಮೂಲ ಸೌಲಭ್ಯ ಹೆಚ್ಚಿಸಲು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಆರ್ಥಿಕ ಸಹಾಯವನ್ನು ಮರುಪರಿಶೀಲಿಸಬೇಕು ಎಂದು ಹೇಳಿದ್ದಾರೆ.

ಅಪರೇಷನ್ ಸಿಂದೂರ್ ಕಾರ್ಯಚರಣೆಯಿಂದ ದೇಶ-ವಿದೇಶಗಳಲ್ಲಿ ಭಾರತೀಯರು ಹೆಮ್ಮೆಪಡುವಂತಾಗಿದೆ.

ಪಾಕಿಸ್ತಾನದಲ್ಲಿ ಉಗ್ರರ ನೆಲೆಗಳಲ್ಲಿ ಧ್ವಂಸ ಮಾಡುವಲ್ಲಿ ಭಾರತೀಯ ಸೇನೆ ಯಶಸ್ವಿಯಾಗಿದ್ದು, ಇದಕ್ಕಾಗಿ ದೇಶಾದ್ಯಂತ ಯೋಧರ ಕಾರ್ಯಚರಣೆಗೆ ಬೆಂಬಲ ನೀಡಿ ತಿರಂಗಾ ಯಾತ್ರೆ ನಡೆಸಲಾಗುತ್ತಿದೆ ಎಂದು ಕೇಂದ್ರ ಸಚಿವರು ಹೇಳಿದರು.

<><*<><>*><>

ಪಹಲ್ಗಾಮ್‌ನಲ್ಲಿ ದಾಳಿ ನಂತರ ಪಾಕ್ ಉಗ್ರರ ನೆಲೆಗಳನ್ನು ನಾಶಮಾಡಿದ ನಂತರ ಭಾರತೀಯ ಸೈನಿಕರ ಸಾಹಸದ ಬಗ್ಗೆ ಅಭಿಮಾನದ ಮಹಾಪೂರವೇ ಹರಿದು ಬರುತ್ತಿದೆ.

ದೇಶದ ರಕ್ಷಣೆ ಮತ್ತು ಅಭಿವೃದ್ಧಿಯಲ್ಲಿ ಪ್ರತಿಯೊಬ್ಬ ನಾಗರಿಕರನು ಯೋಧನೆಯಾಗಿರುತ್ತಾನೆ ಎಂದು ಮಡಿಕೇರಿಯ ಮೇಜರ್ ಕುಶವಂತ್ ಸೇರಿದಂತೆ ಯೋಧರು ಆಕಾಶವಾಣಿಯೊಂದಿಗೆ ಅನಿಸಿಕೆ ಹಂಚಿಕೊಂಡಿದ್ದಾರೆ.

<><*<><>*><>

ಭಾರತ - ಪಾಕಿಸ್ತಾನ ನಡುವೆ ನಡೆದ ಸಂಘರ್ಷದಲ್ಲಿ ಭಾರತೀಯ ಸೇನೆ ನಡೆಸಿದ ಅಪರೇಷನ್ ಸಿಂದೂರ್ ಕಾರ್ಯಚರಣೆ ಯಶಸ್ವಿ ಹಾಗೂ ಯೋಧರಿಗೆ ನೈತಿಕ ಬೆಂಬಲ ನೀಡಲು ಹುಬ್ಬಳ್ಳಿ-ದಾರವಾಡ ಮಹಾನಗರದಲ್ಲಿ ಇಂದು ತಿರಂಗಾ ಯಾತ್ರೆ ನಡೆಲಾಯಿತು.

೩ ಸಾವಿರ ಮಠದಿಂದ ಯಾತ್ರೆ ಪ್ರಾರಂಭವಾಯಿತು. ಮೆರವಣಿಗೆ ಉದ್ದಕ್ಕೂ ದೇಶಪ್ರೇಮದ ಘೋಷಣೆ ಮೊಳಗಿದವು.

<><*<><>*><>

ಕೋಲಾರದಲ್ಲಿ ಸಾರ್ವಜನಿಕರ ಸಂರಕ್ಷಣೆ ಕುರಿತು ಸಾರ್ವಜನಿಕರ ಸಂರಕ್ಷಣೆ ಮಾಡುವ ಕುರಿತು ನಿನ್ನೆ "ಆಪರೇಷನ್ ಅಭ್ಯಾಸ್" ನಾಗರೀಕ ಸುರಕ್ಷಾ ಅಣಕು ಪ್ರದರ್ಶನ ನಡೆಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪೊಲೀಸ್, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ, ರೆಡ್‌ಕ್ರಾಸ್ ಸೇರಿದಂತೆ ವಿವಿಧ ಸಂಸ್ಥೆಗಳ ಸಹಯೋಗದೊಂದಿಗೆ, ಈ ಪ್ರದರ್ಶನ ನಡೆಸಲಾಯಿತು. ಜನ ನಿಬಿಡ ಪ್ರದೇಶಗಳಲ್ಲಿ ನಡೆಯುವ ಭಯೋತ್ಪಾದಕ ಚಟುವಟಿಕೆ, ಅಗ್ನಿಅವಘಡ, ಬಾಂಬ್ ಸ್ಫೋಟ, ಕಟ್ಟಡ ದುರಂತ ಇತರ ಅಹಿತಕರ ಘಟನೆಗಳಿಂದ ಸಾರ್ವಜನಿಕರು ಭಯ ಭೀತರಾಗದೆ ಅರಿವು ಮೂಡಿಸಲು ಅಣುಕು ಪ್ರದರ್ಶನ ಹಾಗೂ ಅಕಸ್ಮಿಕವಾಗಿ ಡ್ರೋನ್

ದಾಳಿಯಿಂದ ಸ್ಫೋಟ ಸಂಭವಿಸಿದಾಗ ಕಟ್ಟಡದಲ್ಲಿ ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಸಾರ್ವಜನಿಕರನ್ನು ರಕ್ಷಿಸುವ ಬಗ್ಗೆ ಅಣುಕು ಪ್ರದರ್ಶನ ಪ್ರಾತ್ಯಕ್ಷಿಕೆ ನಡೆಸಲಾಯಿತು.

ತುರ್ತು ಸಂದರ್ಭಗಳಲ್ಲಿ ಸಾರ್ವಜನಿಕರು ತಮ್ಮನ್ನು ತಾವು ಹೇಗೆ ರಕ್ಷಿಸಿಕೊಳ್ಳಬೇಕು ಎಂಬುದರ ಬಗ್ಗೆ ಪೋಲೀಸ್ ಇಲಾಖೆ, ಬಾಂಬ್ ಸ್ಕ್ವಾಡ್, ಡಾಗ್ ಸ್ಕ್ವಾಡ್, ಅಗ್ನಿ ಶಾಮಕ ದಳ, ಆರೋಗ್ಯ ಇಲಾಖೆ ಪಾತ್ರದ ಕುರಿತು ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸಲಾಯಿತು.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸೂಕ್ಷ್ಮ ವಲಯಗಳಲ್ಲಿ ಖಾಸಗಿ ಡ್ರೋನ್ ಚಟುವಟಿಕೆ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಎ ಬಿ ಬಸವರಾಜು ತಿಳಿಸಿದ್ದಾರೆ.

ಭಯೋತ್ಪಾದಕರು, ಡ್ರೋನ್ ಗಳು, ರಿಮೋಟ್ ಕಂಟ್ರೋಲ್ಡ್ ಮೈಕ್ರೋ-ಲೈಟ್ ಏರ್ಕ್ರಾಫ್ಟ್ ಗಳು, ಪ್ಯಾರಿ-ಗ್ಲೈಡರ್‌ಗಳನ್ನು ಬಳಸಿ ದಾಳಿಯ ಮೂಲಕ ಸಾರ್ವಜನಿಕ ಆಸ್ತಿ-ಪಾಸ್ತಿ ನಾಶಪಡಿಸಿ ಕಾನೂನು ಸುವ್ಯವಸ್ಥೆಗೆ ಭಂಗ ಉಂಟುಮಾಡುವ ಸಾಧ್ಯತೆ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

ಭಾರತ ಮತ್ತು ಪಾಕಿಸ್ತಾನ ದೇಶಗಳ ನಡುವಿನ ಬಿಗುವಿನ ವಾತಾವರಣ ಈಗ ಶಮನಗೊಂಡಿದೆ. ಅದಾಗ್ಯೂ ತುರ್ತು ಸಂದರ್ಭಗಳಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿರುವಂತಹ ಸೂಕ್ಷ್ಮವಲಯಗಳನ್ನು ಗುರುತಿಸಿ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವತಿಯಿಂದ ಭದ್ರತಾ ಕಾಳಜಿಗಳ ದೃಷ್ಟಿಯಿಂದ ಅಗತ್ಯ ಕ್ರಮ ತೆಗೆದುಕೊಳ್ಳಲು ಸಂಬಂಧಪಟ್ಟ ಇಲಾಖೆಗಳಿಗೆ ಸೂಚಿಸಲಾಗಿದೆ.

<><*<><>*><>

ಅಕ್ಕಡಿ ಬೆಳೆ ಬೆಳೆಯಲು ಕೃಷಿ ಪರಿಕರ ಮಾರಾಟಗಾರರು ರೈತರನ್ನು ಪ್ರೋತ್ಸಾಹಿಸಬೇಕೆಂದು ದಾವಣಗೆರೆ ಸಹಾಯಕ ಕೃಷಿ ನಿರ್ದೇಶಕ ಶ್ರೀಧರ ಮೂರ್ತಿ ಸಲಹೆ ನೀಡಿದ್ದಾರೆ.

ದಾವಣಗೆರೆಯಲ್ಲಿಂದು ಹಮ್ಮಿಕೊಂಡಿದ್ದ, ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು. ಮೆಕ್ಕೆಜೋಳ ಬೆಳೆಯಲ್ಲಿ ಅಕ್ಕಡಿಯಾಗಿ ತೊಗರಿ, ಅವರೆ ಸೇರಿದಂತೆ ಇತರೆ ದ್ವಿದಳ ಧಾನ್ಯ ಬೆಳೆಯಲು ಎಲ್ಲ ಕೃಷಿ ಪರಿಕರ ಮಾರಾಟಗಾರರು ರೈತರಿಗೆ ಪ್ರೋತ್ಸಾಹ ನೀಡಿ ಜಿಲ್ಲೆಯಲ್ಲಿ ದ್ವಿದಳ ಧಾನ್ಯಗಳ ಬಿತ್ತನೆ ಪ್ರದೇಶ ವಿಸ್ತರಿಸುವಂತೆ ಗಮನಹರಿಸಬೇಕು ಎಂದರು.

ತರಬೇತಿಯಲ್ಲಿ ನೂರಕ್ಕೂ ಅಧಿಕ ಕೃಷಿ ಪರಿಕರ ಮಾರಾಟಗಾರರು ಭಾಗವಹಿಸಿದ್ದರು.

<><*<><>*><>